# ನಾಲ್ಕನೇ ರಾಜ್ಯಮಟ್ಟದ
# ಮಾನವ ಸಂಪನ್ಮೂಲ ವೃತ್ತಿನಿರತರ
# ಕನ್ನಡ ಸಮ್ಮೇಳನ 2020

## ಮಾನವ ಸಂಪನ್ಮೂಲ ಕ್ಷೇತ್ರದ ಸಾಧಕ ಪ್ರಶಸ್ತಿ - 2020



## ಪ್ರೊ. ರಮೇಶ್ ಬಿ. ರವರ
## ಪ್ರಶಸ್ತಿ ಪತ್ರ

**ಪ್ರೊ. ರಮೇಶ್ ಬಿ.** ರವರು ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನ ಟಿ. ಗೊಲ್ಲಹಳ್ಳಿಯಲ್ಲಿ 1971ರಲ್ಲಿ ಜನಿಸಿದರು. ಬೆಂಗಳೂರು ವಿಶ್ವವಿದ್ಯಾಲಯದಿಂದ ಸಮಾಜಕಾರ್ಯ ವಿಷಯದಲ್ಲಿ ಸ್ನಾತಕೋತ್ತರ ಹಾಗೂ ಡಾಕ್ಟರೇಟ್ ಪದವಿ ಗಳಿಸಿದ್ದಾರೆ. 1998ರಲ್ಲಿ ಮಾತೃ ವಿಭಾಗದಲ್ಲಿ ಅತಿಥಿ ಉಪನ್ಯಾಸಕರಾಗಿ ವೃತ್ತಿಜೀವನಕ್ಕೆ ಪಾದಾರ್ಪಣೆ ಮಾಡಿದ ಶ್ರೀಯುತರು 2003 ರಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕುವೆಂಪು ವಿಶ್ವವಿದ್ಯಾಲಯ, ಸಮಾಜಕಾರ್ಯ ಅಧ್ಯಯನ ಹಾಗೂ ಸಂಶೋಧನಾ ವಿಭಾಗದಲ್ಲಿ ನೇಮಕಗೊಂಡರು. ತದನಂತರ 2011 ಮತ್ತು 2014 ರಲ್ಲಿ ಕ್ರಮವಾಗಿ ಸಹಪ್ರಾಧ್ಯಾಪಕರಾಗಿ ಹಾಗೂ ಪ್ರಾಧ್ಯಾಪಕರಾಗಿ ತುಮಕೂರು ವಿಶ್ವವಿದ್ಯಾಲಯ, ಸಮಾಜಕಾರ್ಯ ಅಧ್ಯಯನ ಹಾಗೂ ಸಂಶೋಧನಾ ವಿಭಾಗದಲ್ಲಿ ನಿಯೋಜನೆಗೊಂಡರು. ಪ್ರಸ್ತುತ ಬೆಂಗಳೂರು ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಮೌಲ್ಯಮಾಪನ ಕುಲಸಚಿವರಾಗಿ ಸೇವೆ ಸಲ್ಲಿಸುತ್ತಿರುವ ಶ್ರೀಯುತರು ಸೆಪ್ಟೆಂಬರ್ 2018 ರಿಂದ ಫೆಬ್ರವರಿ 2020 ರವರೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಸಚಿವರಾಗಿ ಸೇವೆ ಸಲ್ಲಿಸಿದ್ದಾರೆ.

ವಿಶ್ವವಿದ್ಯಾಲಯ ಆಡಳಿತದ ವಿವಿಧ ಸ್ತರಗಳಲ್ಲಿ ಅನನ್ಯ ಸೇವೆ ಸಲ್ಲಿಸಿದ ಅನುಭವ ಹೊಂದಿರುವ ಶ್ರೀಯುತರು ಕುವೆಂಪು ವಿಶ್ವವಿದ್ಯಾಲಯ ಸಮಾಜಕಾರ್ಯ ಅಧ್ಯಯನ ಹಾಗೂ ಸಂಶೋಧನಾ ವಿಭಾಗದ ಮುಖ್ಯಸ್ಥರು, ವಿದ್ಯಾರ್ಥಿನಿಲಯದ ವಾರ್ಡನ್ ಹಾಗೂ ತುಮಕೂರು ವಿಶ್ವವಿದ್ಯಾಲಯ ಸಮಾಜಕಾರ್ಯ ವಿಭಾಗದ ಮುಖ್ಯಸ್ಥರು, ಐಕ್ಯೂಎಸಿಯ ನಿರ್ದೇಶಕರು, ಗೌತಮಬುದ್ಧ ಪೀಠದ ನಿರ್ದೇಶಕರು, ವಿದ್ಯಾರ್ಥಿ ಕಲ್ಯಾಣ ಘಟಕದ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಪೀಠದ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ.

ಪ್ರತಿಷ್ಠಿತ ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಸಮ್ಮೇಳನ ಕಾರ್ಯಗಾರಗಳನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಿದ ಅನುಭವ ಹೊಂದಿರುವ ಶ್ರೀಯುತರು ಹಲವಾರು ಸಂಶೋಧನಾ ಪ್ರಬಂಧಗಳನ್ನು ಹೆಸರಾಂತ ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ ಮಂಡಿಸಿದ್ದಾರೆ. ಎಂ.ಫಿಲ್ ಹಾಗೂ ಡಾಕ್ಟರೇಟ್ ಸಂಶೋಧನಾರ್ಥಿಗಳಿಗೆ ಮಾರ್ಗದರ್ಶನ ನೀಡುವುದರ ಜೊತೆಗೆ ಹಲವು ಪ್ರಾಯೋಜಿತ ಸಂಶೋಧನಾ ಪ್ರಾಯೋಜನೆಗಳನ್ನು ಕೂಡ ಯಶಸ್ವಿಯಾಗಿ ನಿರ್ವಹಿಸಿರುತ್ತಾರೆ ಮತ್ತು ಮಾರ್ಗದರ್ಶನ ನೀಡಿರುತ್ತಾರೆ.

ಸರ್ಕಾರಿ, ಸರ್ಕಾರೇತರ ಹಾಗೂ ನಾಗರೀಕ ಸಮಾಜಗಳೊಂದಿಗೆ ನಿಕಟ ಸಂಪರ್ಕ ಹೊಂದಿರುವ ಶ್ರೀಯುತರು ಹಲವಾರು ಸಾರ್ವಜನಿಕ ವಿಚಾರಗೋಷ್ಠಿಗಳನ್ನು ಆಯೋಜಿಸಿರುತ್ತಾರೆ. ಸಮಾಜಕಾರ್ಯ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಶ್ರೀಯುತರು ಸರ್ಕಾರ ಹಾಗೂ ವಿಶ್ವವಿದ್ಯಾಲಯ ಹಂತದಲ್ಲಿ ಹಲವಾರು ಶೈಕ್ಷಣಿಕ ಸಮಿತಿಗಳ ಸದಸ್ಯರು ಮತ್ತು ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ರಾಷ್ಟ್ರದ ಸುಮಾರು 10 ಕ್ಕೂ ಅಧಿಕ ವಿಶ್ವವಿದ್ಯಾಲಯಗಳ ಬಿಓಎಸ್ ಮತ್ತು ಬಿಓಈ ಗಳ ಮುಖ್ಯಸ್ಥರು ಹಾಗೂ ಸದಸ್ಯರು, 3 ಪ್ರತಿಷ್ಠಿತ ಕಾಲೇಜುಗಳ ಆಡಳಿತ ಮಂಡಳಿಗಳ ಸದಸ್ಯರು ಹಾಗೂ ಹಲವಾರು ವೃತ್ತ್ಯಾತ್ಮಕ ಸಂಘಟನೆಗಳ ಅಜೀವ ಸದಸ್ಯರಾಗಿಯೂ ಶ್ರೀಯುತರು ಸೇವೆ ಸಲ್ಲಿಸುತ್ತಿದ್ದಾರೆ.

ಪ್ರೊ. ರಮೇಶ್ ಬಿ. ರವರು ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಕ್ಷೇತ್ರದಲ್ಲಿ ಸಲ್ಲಿಸಿದ ಗಣನೀಯ ಸೇವೆಯನ್ನು ಗುರುತಿಸಿದ ಕರ್ನಾಟಕ ಸರ್ಕಾರ 2017 ರಲ್ಲಿ ಜಿಲ್ಲಾ ಕನ್ನಡ ರಾಜ್ಯೋತ್ಸವ ಪುರಸ್ಕಾರ, ಗ್ಲೋಬಲ್ ಮ್ಯಾನೇಜ್‌ಮೆಂಟ್ ಕೌನ್ಸಿಲ್, ಅಹಮದಾಬಾದ್ ರವರು 2018 ರಲ್ಲಿ ಆದರ್ಶ ವಿದ್ಯಾ ಸರಸ್ವತಿ ರಾಷ್ಟ್ರೀಯ ಪುರಸ್ಕಾರ ಹಾಗೂ ಫೆಬ್ರವರಿ 2019 ರಲ್ಲಿ ಟೀಚಿಂಗ್ & ರೀಸರ್ಚ್ ಎಕ್ಸಲೆಂಟ್ ಪ್ರಶಸ್ತಿಯನ್ನು ಜಿಆರ್‌ಎಬಿಎಸ್ ಎಜುಕೇಷನಲ್ ಚಾರಿಟಬಲ್ ಟ್ರಸ್ಟ್, ಚೆನ್ನೈ ರವರು ನೀಡಿ ಗೌರವಿಸಿದ್ದಾರೆ.

ಪ್ರೊ. ರಮೇಶ್ ಬಿ. ರವರು ಶೈಕ್ಷಣಿಕ, ಆಡಳಿತಾತ್ಮಕ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಸಲ್ಲಿಸಿರುವ ಗಣನೀಯ ಸೇವೆ ಮತ್ತು ಕೊಡುಗೆಗಳನ್ನು ಗುರುತಿಸಿ, ನಾಲ್ಕನೇ ರಾಜ್ಯಮಟ್ಟದ ಮಾನವ ಸಂಪನ್ಮೂಲ ವೃತ್ತಿನಿರತರ ಕನ್ನಡ ಸಮ್ಮೇಳನ 2020ರ ಶುಭ ಸಂದರ್ಭದಲ್ಲಿ ಶ್ರೀಯುತರನ್ನು ಸನ್ಮಾನಿಸುತ್ತಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಚಾರ. ಭಗವಂತ ಇವರಿಗೆ ಮತ್ತು ಇವರ ಕುಟುಂಬ ಸದಸ್ಯರಿಗೆ ಆರೋಗ್ಯ ಸುಖ–ಶಾಂತಿ ನೆಮ್ಮದಿ ಸಮೃದ್ಧಿಯನ್ನು ದಯಪಾಲಿಸಿ ಸದಾಕಾಲ ಸುಖವಾಗಿರಿಸಲೆಂದು ಎಲ್ಲ ಮಾನವ ಸಂಪನ್ಮೂಲ ವೃತ್ತಿನಿರತರ ಪರವಾಗಿ ಆಶಿಸುತ್ತೇವೆ.

**ಕನ್ನಡ ಬಳಸಿ, ಕಲಿಸಿ ಮತ್ತು ಉಳಿಸಿ.**

www.hrkancon.com